# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1138** |
| ಸದಸ್ಯರ ಹೆಸರು | : | ಶ್ರೀ ಕೆ. ಅಬ್ದುಲ್ ಜಬ್ಬರ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 17-03-2025 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

***

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಇಂಧನ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | (ಕೆಳಗೆ ನೀಡಲಾಗಿದೆ) |

**ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ:-** ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದಲ್ಲಿ ಇರುವ ಅವಶ್ಯಕ ಹುದ್ದೆಗಳನ್ನು ಕಾಲ ಕಾಲಕ್ಕೆ ನೇರ ನೇಮಕಾತಿ ಮತ್ತು ಪದೋನ್ನತಿ ಮೂಲಕ ಭರ್ತಿ ಮಾಡಲಾಗುತ್ತಿದೆ. ಅವಶ್ಯಕ ಸಿಬ್ಬಂದಿಯನ್ನು ಹೊರಗಿನ ಗುತ್ತಿಗೆ ಸಂಸ್ಥೆಗಳಿಂದ ಹೊರಗುತ್ತಿಗೆ ಆಧಾರದ ಮೇಲೆ ಪಡೆದು ನಿಗಮದ ದೈನಂದಿನ ಕೆಲಸ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸಲಾಗುತ್ತಿದೆ.

**ಕರ್ನಾಟಕ ವಿದ್ಯುತ್ ನಿಗಮ ನಿಯಮಿತ:-** ಕರ್ನಾಟಕ ವಿದ್ಯುತ್ ನಿಗಮದಲ್ಲಿ ಮಂಜೂರಾಗಿರುವ ವಿವಿಧ ವೃಂದ ಹುದ್ದೆಗಳ ವಿವರವು ಕೆಳಕಂಡಂತಿರುತ್ತದೆ.

| | ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ | ಭರ್ತಿ ಮಾಡಿರುವ ಒಟ್ಟು ಹುದ್ದೆಗಳ ಸಂಖ್ಯೆ | ಖಾಲಿ ಹುದ್ದೆಗಳ ವಿವರ |
|---|---|---|---|
| ಒಟ್ಟು | 8163 | 3528 | 4635* |

* ನಿಗಮದ ವೃಂದ ಬಲವನ್ನು ಪರಿಷ್ಕರಿಸುವ ಸಲುವಾಗಿ ಹೆಚ್‌ಎಲ್‌ಸಿ ಸಮಿತಿಯು ಸಲ್ಲಿಸಿರುವ ವರದಿಯನ್ನು ನಿಗಮದ ನಿರ್ದೇಶಕರ ಮಂಡಳಿಯಲ್ಲಿ ಮಂಡಿಸಿ ಅನುಮೋದನೆ ಪಡೆಯುವ ಪ್ರಕ್ರಿಯೆಯು ಜಾರಿಯಲ್ಲಿದ್ದು, ಸದರಿ ವರದಿಯನುಸಾರ ಪರಿಷ್ಕರಣೆಗೊಳ್ಳಲಿರುವ ವೃಂದ ಬಲದ ಅನ್ವಯ ಲಭ್ಯವಾಗಲಿರುವ ಖಾಲಿ ಹುದ್ದೆಗಳ ವಿವರ ಕೆಳಕಾಣಿಸಿರುವಂತಿದೆ.

| ಪರಿಷ್ಕೃತ ಮಂಜೂರಾದ ಒಟ್ಟು ಹುದ್ದೆಗಳ ಸಂಖ್ಯೆ | ಭರ್ತಿ ಮಾಡಿರುವ ಒಟ್ಟು ಹುದ್ದೆಗಳ ಸಂಖ್ಯೆ | ಖಾಲಿ ಹುದ್ದೆಗಳ ವಿವರ |
|---|---|---|
| **5408** | **3528** | **1880** |

**ದಿ ಮೈಸೂರು ಎಲೆಕ್ಟ್ರಿಕಲ್ ಇಂಡಸ್ಟ್ರೀಸ್ ಲಿಮಿಟೆಡ್:-** ಪ್ರಸ್ತುತ ಎಂಇಐ ಕಂಪನಿಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆ ಕಾರ್ಯ ಚಾಲ್ತಿಯಲ್ಲಿದ್ದು, ಪರಿಷ್ಕರಣೆ ಮುಕ್ತಾಯಗೊಂಡ ನಂತರ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುವುದು.

**ಪವರ್ ಕಂಪನಿ ಆಫ್ ಕರ್ನಾಟಕ ಲಿಮಿಟೆಡ್:-** ಪಿಸಿಕೆಎಲ್ ನಲ್ಲಿ ಪ್ರಸ್ತುತ 7 ಸಿಬ್ಬಂದಿಗಳ ಕೊರತೆ ಇದೆ.

**ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ:-** ಇಂಧನ ಇಲಾಖೆಯ ಆಡಳಿತ ವ್ಯಾಪ್ತಿಯಲ್ಲಿ ಬರುವ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಸಂಸ್ಥೆಯಲ್ಲಿ ಮಂಜೂರಾದ ಹುದ್ದೆಗಳಲ್ಲಿ 25 ಹುದ್ದೆಗಳು ಖಾಲಿ ಇರುತ್ತದೆ.

ಮುಂದುವರೆದು, ಪ್ರಸ್ತುತ ಒಟ್ಟು 46 ಅಧಿಕಾರಿ / ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದು, ಖಾಲಿ ಇರುವ ಅವಶ್ಯಕ ಹುದ್ದೆಗಳಿಗೆ ಅಧಿಕಾರಿಗಳನ್ನು ಕೆಪಿಟಿಸಿಎಲ್ ಸಂಸ್ಥೆಯಿಂದ ನಿಯೋಜನೆ ಮೇಲೆ ಪಡೆದು ಕಾರ್ಯ ನಿರ್ವಹಿಸಲಾಗುತ್ತಿದೆ.

ಆ) ಬಂದಿದ್ದಲ್ಲಿ, ರಾಜ್ಯದ ಇಂಧನ ಇಲಾಖೆಗೆ ಅವಶ್ಯವಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

ದಿನಾಂಕ: 31.03.2024 ರ ಅಂತ್ಯಕ್ಕೆ ಕವಿಪ್ರನಿನಿ ಹಾಗೂ ವಿದ್ಯುತ್ ಸರಬರಾಜು ಕಂಪನಿಗಳಲ್ಲಿನ ಹುದ್ದೆಗಳ ವಿವರಗಳನ್ನು **ಅನುಬಂಧ-1** ರಲ್ಲಿ ಒದಗಿಸಲಾಗಿದೆ.

**ಕರ್ನಾಟಕ ವಿದ್ಯುತ್ ನಿಗಮ ನಿಯಮಿತ:-** ಕರ್ನಾಟಕ ವಿದ್ಯುತ್ ನಿಗಮದಲ್ಲಿ ಮಂಜೂರಾಗಿರುವ ವಿವಿಧ ವೃಂದ ಹುದ್ದೆಗಳ ವಿವರವು ಕೆಳಕಂಡಂತಿರುತ್ತದೆ.

| | ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ | ಭರ್ತಿ ಮಾಡಿರುವ ಒಟ್ಟು ಹುದ್ದೆಗಳ ಸಂಖ್ಯೆ | ಖಾಲಿ ಹುದ್ದೆಗಳ ವಿವರ |
|---|---|---|---|
| ಒಟ್ಟು | 8163 | 3528 | 4635* |

* ನಿಗಮದ ವೃಂದ ಬಲವನ್ನು ಪರಿಷ್ಕರಿಸುವ ಸಲುವಾಗಿ ಹೆಚ್‌ಎಲ್‌ಸಿ ಸಮಿತಿಯು ಸಲ್ಲಿಸಿರುವ ವರದಿಯನ್ನು ನಿಗಮದ ನಿರ್ದೇಶಕರ ಮಂಡಳಿಯಲ್ಲಿ ಮಂಡಿಸಿ ಅನುಮೋದನೆ ಪಡೆಯುವ ಪ್ರಕ್ರಿಯೆಯು ಜಾರಿಯಲ್ಲಿದ್ದು, ಸದರಿ ವರದಿಯನುಸಾರ ಪರಿಷ್ಕರಣೆಗೊಳ್ಳಲಿರುವ ವೃಂದ ಬಲದ ಅನ್ವಯ ಲಭ್ಯವಾಗಲಿರುವ ಖಾಲಿ ಹುದ್ದೆಗಳ ವಿವರ ಕೆಳಕಾಣಿಸಿರುವಂತಿದೆ.

| ಪರಿಷ್ಕೃತ ಮಂಜೂರಾದ ಒಟ್ಟು ಹುದ್ದೆಗಳ ಸಂಖ್ಯೆ | ಭರ್ತಿ ಮಾಡಿರುವ ಒಟ್ಟು ಹುದ್ದೆಗಳ ಸಂಖ್ಯೆ | ಖಾಲಿ ಹುದ್ದೆಗಳ ವಿವರ |
|---|---|---|
| **5408** | **3528** | **1880** |

**ಕರ್ನಾಟಕ ವಿದ್ಯುತ್ ಕಾರ್ಖಾನೆ ನಿಯಮಿತ:-** ಕವಿಕಾ ಸಂಸ್ಥೆಯಲ್ಲಿ ಈ ಕೆಳಕಂಡಂತೆ ಹುದ್ದೆಗಳು ಖಾಲಿ ಇರುತ್ತದವೆ.

'ಎ' ವೃಂದ – 15
'ಬಿ' ವೃಂದ – 28
'ಸಿ' ವೃಂದ – 64
'ಡಿ' ವೃಂದ – 199

ಕವಿಕಾ ಸಂಸ್ಥೆಯಲ್ಲಿ ಪ್ರಸ್ತುತ 106 ಅಧಿಕಾರಿ/ ಉದ್ಯೋಗಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

**ದಿ ಮೈಸೂರು ಎಲೆಕ್ಟ್ರಿಕಲ್ ಇಂಡಸ್ಟ್ರೀಸ್ ಲಿಮಿಟೆಡ್:-** ಎಂಇಐ ಕಂಪನಿಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ / ನೌಕರರ ವಿವರಗಳು ಈ ಕೆಳಕಂಡಂತೆ ಇರುತ್ತದೆ.

| ಎ | ಬಿ | ಸಿ | ಡಿ | **ಒಟ್ಟು** |
|---|---|---|---|---|
| 6 | 7 | 72 | 2 | **87** |

**ಮುಖ್ಯ ವಿದ್ಯುತ್ ಪರಿವೀಕ್ಷಣಾಲಯ:-** ವಿದ್ಯುತ್ ಪರಿವೀಕ್ಷಣಾಲಯ ಇಲಾಖೆಗೆ ಮಂಜೂರಾಗಿರುವ ಹಾಲಿ ಖಾಲಿ ಇರುವ ಹುದ್ದೆಗಳ ವಿವರವನ್ನು **ಅನುಬಂಧ-2**ರಲ್ಲಿ ಒದಗಿಸಲಾಗಿದೆ.

**ಪವರ್ ಕಂಪನಿ ಆಫ್ ಕರ್ನಾಟಕ ಲಿಮಿಟೆಡ್:-** ಪಿಸಿಕೆಎಲ್ ಗೆ ಅವಶ್ಯವಿರುವ ಸಿಬ್ಬಂದಿಗಳ ಸಂಖ್ಯೆ 50 ಪ್ರಸ್ತುತ 43 ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ.

**ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ:-** ಇಂಧನ ಇಲಾಖೆಯ ಆಡಳಿತ ವ್ಯಾಪ್ತಿಯಲ್ಲಿ ಬರುವ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಸಂಸ್ಥೆಯಲ್ಲಿ ಮಂಜೂರಾದ ಹುದ್ದೆಗಳಲ್ಲಿ 25 ಹುದ್ದೆಗಳು ಖಾಲಿ ಇರುತ್ತದೆ.

| | | |
|---|---|---|
| | | ಮುಂದುವರೆದು, ಪ್ರಸ್ತುತ ಒಟ್ಟು 46 ಅಧಿಕಾರಿ / ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದು, ಖಾಲಿ ಇರುವ ಅವಶ್ಯಕ ಹುದ್ದೆಗಳಿಗೆ ಅಧಿಕಾರಿಗಳನ್ನು ಕೆಪಿಟಿಸಿಎಲ್ ಸಂಸ್ಥೆಯಿಂದ ನಿಯೋಜನೆ ಮೇಲೆ ಪಡೆದು ಕಾರ್ಯ ನಿರ್ವಹಿಸಲಾಗುತ್ತಿದೆ. |
| ಇ) | ಇಂಧನ ಇಲಾಖೆಯಲ್ಲಿ ಸಿಬ್ಬಂದಿಗಳು ಅತ್ಯವಶ್ಯಕವಾಗಿರುವುದರಿಂದ ಖಾಲಿ ಇರುವ ಸಿಬ್ಬಂದಿಗಳನ್ನು ಯಾವ ಕಾಲಮಿತಿಯೊಳಗೆ ನೇಮಕ ಮಾಡಲಾಗುವುದು; (ಸಂಪೂರ್ಣ ಮಾಹಿತಿ ಒದಗಿಸುವುದು) | 1. ನಿಗಮವು, ದಿನಾಂಕ: 01.02.2022 ರಂದು ಉದ್ಯೋಗ ಪ್ರಕಟಣೆಯನ್ನು ಹೊರಡಿಸಿ, ನೇರ ನೇಮಕಾತಿ ಕೋಟಾದಡಿಯಲ್ಲಿ ಖಾಲಿ ಇದ್ದ ಸಹಾಯಕ ಇಂಜಿನಿಯರ್ (ವಿದ್ಯುತ್/ಸಿವಿಲ್), ಕಿರಿಯ ಇಂಜಿನಿಯರ್ (ವಿದ್ಯುತ್/ಸಿವಿಲ್) ಮತ್ತು ಕಿರಿಯ ಸಹಾಯಕ, ಒಟ್ಟು 1492 ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಂಡಿರುತ್ತದೆ. ಅಂತಿಮ ಆಯ್ಕೆ ಪಟ್ಟಿಯನ್ವಯ ಆಯ್ಕೆಗೊಂಡಿದ್ದ 1355 ಅಭ್ಯರ್ಥಿಗಳಲ್ಲಿ, 1211 ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಜಾರಿ ಮಾಡಲಾಗಿರುತ್ತದೆ. ಬಾಕಿ ಉಳಿದ 144 ಹುದ್ದೆಗಳ ಪೈಕಿ, 9-ಸಹಾಯಕ ಇಂಜಿನಿಯರ್ (ವಿದ್ಯುತ್) ಮತ್ತು 29-ಕಿರಿಯ ಇಂಜಿನಿಯರ್(ವಿದ್ಯುತ್) ಹುದ್ದೆಗಳಿಗೆ ಕಾಯ್ದಿರಿಸಿದ ಪಟ್ಟಿಯನ್ನು ಹೊರಡಿಸಲಾಗಿರುತ್ತದೆ. ಬಾಕಿ ಉಳಿದ ಸಹಾಯಕ ಇಂಜಿನಿಯರ್ (ಸಿವಿಲ್), ಕಿರಿಯ ಇಂಜಿನಿಯರ್ (ಸಿವಿಲ್) ಮತ್ತು ಕಿರಿಯ ಸಹಾಯಕ ಹುದ್ದೆಗಳಿಗೆ ಕಾಯ್ದಿರಿಸಿದ ಪಟ್ಟಿ ಬಿಡುಗಡೆಗೊಳಿಸುವುದು ಬಾಕಿ ಇರುತ್ತದೆ.<br>2. ಪ್ರಸ್ತುತ ಕವಿಪ್ರನಿನಿ ಮತ್ತು ವಿವಿಧ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಖಾಲಿ ಇರುವ 433-ಕಿರಿಯ ಸ್ಟೇಷನ್ ಪರಿಚಾರಕ ಮತ್ತು 2542-ಕಿರಿಯ ಪವರ್‌ಮ್ಯಾನ್ ಒಟ್ಟು-2975 ಹುದ್ದೆಗಳನ್ನು ಭರ್ತಿ ಮಾಡಲು ದಿನಾಂಕ: 14.10.2024 ರಂದು ಉದ್ಯೋಗ ಪ್ರಕಟಣೆಯನ್ನು ಹೊರಡಿಸಲಾಗಿದ್ದು, ಸದರಿ ನೇಮಕಾತಿ ಪ್ರಕ್ರಿಯೆಯು ಚಾಲ್ತಿಯಲ್ಲಿರುತ್ತದೆ.<br>**ಕರ್ನಾಟಕ ವಿದ್ಯುತ್ ನಿಗಮ ನಿಯಮಿತ:-** ನಿಗಮದಲ್ಲಿ ಖಾಲಿ ಇರುವ ಹುದ್ದೆಗಳಲ್ಲಿ 622 ಹುದ್ದೆಗಳಿಗೆ (ಎಇ, ಜೆಇ, ಕೆಮಿಸ್ಟ್ & ಕೆಮಿಕಲ್ ಸೂಪರ್‌ವೈಸರ್) ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಲು ಅಧಿಸೂಚನೆಯನ್ನು ಹೊರಡಿಸಿ ಕೆಇಇ ಸಂಸ್ಥೆಯಿಂದ ನೇಮಕಾತಿ ಪ್ರಕ್ರಿಯೆ ನಡೆಸಿದ್ದು, ಪ್ರಸ್ತುತ ದಾಖಲೆಗಳನ್ನು ಪರಿಶೀಲಿಸುವ ಕ್ರಮ ಕೈಗೊಂಡು ತಾತ್ಕಾಲಿಕ ಆಯ್ಕೆ ಪಟ್ಟಿಗಳನ್ನು ಪ್ರಕಟಿಸುವ ಕ್ರಮ ಕೈಗೊಳ್ಳಲಾಗುತ್ತಿದೆ. ಮುಂದುವರೆದಂತೆ ನಿಗಮದಲ್ಲಿರುವ ಖಾಲಿ ಹುದ್ದೆಗಳನ್ನು ಭೂ ಸಂತ್ರಸ್ತ ಯೋಜನೆಯಡಿ ಮತ್ತು ಅನುಕಂಪ ಆಧಾರದ ಮೇಲೆ ನಿಯಮಾವಳಿಯಂತೆ ವಿವಿಧ ವೃಂದದ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿರುವುದರಿಂದ ದೈನಂದಿನ ಕೆಲಸಗಳಿಗೆ ತೊಂದರೆಯಾಗುತ್ತಿರುವುದಿಲ್ಲ.<br>**ಕರ್ನಾಟಕ ವಿದ್ಯುತ್ ಕಾರ್ಖಾನೆ ನಿಯಮಿತ:-** ಕವಿಕಾ ಸಂಸ್ಥೆಯಲ್ಲಿ 306 ವಿವಿಧ ವೃಂದದ ಹುದ್ದೆಗಳು ಖಾಲಿ ಇದ್ದು, ಇವುಗಳಲ್ಲಿ 100 ಹುದ್ದೆಗಳು ನೇರ ನೇಮಕಾತಿಯ ಹುದ್ದೆಗಳಾಗಿದ್ದು, ಉಳಿದ 206 ಹುದ್ದೆಗಳು ಮುಂಬಡ್ತಿಯ ಹುದ್ದೆಗಳಾಗಿರುತ್ತವೆ. ಮೇಲ್ಕಂಡ ವಿವರಣೆಯಂತೆ 100 ನೇರ ನೇಮಕಾತಿಯ ವಿವಿಧ ವೃಂದದ ಹುದ್ದೆಗಳ ಭರ್ತಿಗಾಗಿ ಕವಿಕಾ ನಿರ್ದೇಶಕರ ಮಂಡಳಿ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆದು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು. |

| | | |
|---|---|---|
| | | **ದಿ ಮೈಸೂರು ಎಲೆಕ್ಟ್ರಿಕಲ್ ಇಂಡಸ್ಟ್ರೀಸ್ ಲಿಮಿಟೆಡ್:-** ಪ್ರಸ್ತುತ ಎಂಇಐ ಕಂಪನಿಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆ ಕಾರ್ಯ ಚಾಲ್ತಿಯಲ್ಲಿದ್ದು, ಪರಿಷ್ಕರಣೆ ಮುಕ್ತಾಯಗೊಂಡ ನಂತರ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುವುದು.<br>**ಮುಖ್ಯ ವಿದ್ಯುತ್ ಪರಿವೀಕ್ಷಣಾಲಯ:-** ವಿದ್ಯುತ್ ಪರಿವೀಕ್ಷಣಾಲಯ ಇಲಾಖೆಯಲ್ಲಿ ಸರ್ಕಾರದಿಂದ ಗ್ರೂಪ್ ಬಿ ವೃಂದದ 32 ಸ.ವಿ.ಪ ಹುದ್ದೆಗಳನ್ನು ಭರಿಸಲು ಅನುಮತಿಸಿದಂತೆ ಪ್ರಸ್ತಾವನೆಯನ್ನು ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಸಲ್ಲಿಸಲಾಗಿತ್ತು. ಸದರಿ ಪ್ರಸ್ತಾವನೆಗೆ 23 ಅಭ್ಯರ್ಥಿಗಳ ಆಯ್ಕೆ ಪಟ್ಟಿಯನ್ನು ಕಳುಹಿಸಿರುತ್ತಾರೆ. ಅದರಂತೆ, 21 ಅಭ್ಯರ್ಥಿಗಳು ನೇಮಕಗೊಂಡಿರುತ್ತಾರೆ. ಗ್ರೂಪ್ ಸಿ ವೃಂದದ 16 ಪ್ರ.ದ.ಸ ಮತ್ತು 16 ದ್ವಿ.ದ.ಸ. ಹುದ್ದೆಗಳನ್ನು ಭರಿಸಲು ಕೆಪಿಎಸ್‌ಸಿಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.<br>**ಪವರ್ ಕಂಪನಿ ಆಫ್ ಕರ್ನಾಟಕ ಲಿಮಿಟೆಡ್:-** ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವಂತೆ ಕರ್ನಾಟಕದ ವಿದ್ಯುತ್ ಪ್ರಸರಣ ನಿಗಮ ನಿಯಮಿತವನ್ನು ಕೋರಲಾಗಿದೆ.<br>**ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ:-** ಸಂಸ್ಥೆಯ ವೃಂದ ಮತ್ತು ನೇಮಕಾತಿ ನಿಯಮಗಳ ಸಮಗ್ರ ಪರಿಷ್ಕರಣೆ ಮಾಡುತ್ತಿದ್ದು, ಸಂಸ್ಥೆಯ ಅಗತ್ಯತೆಗೆ ತಕ್ಕಂತೆ ಹುದ್ದೆಗಳನ್ನು ಗುರುತಿಸಲಾಗಿದ್ದು, ಈ ಹುದ್ದೆಗಳನ್ನು ಒಳಗೊಂಡ ಪರಿಷ್ಕೃತ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸರ್ಕಾರದ ಅನುಮೋದನೆಯನ್ನು ಪಡೆಯಬೇಕಾಗಿರುತ್ತದೆ. |
| ಈ) | ಅವಶ್ಯವಿರುವ ಇಂಜಿನಿಯರ್ ಹುದ್ದೆಗಳನ್ನು ಸ್ಥಳೀಯವಾಗಿ ಲಭ್ಯವಿರುವ ಅಭ್ಯರ್ಥಿಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳುವ ಚಿಂತನೆ ಸರ್ಕಾರ ನಡೆಸಿದೆಯೇ; ಹಾಗಿದ್ದಲ್ಲಿ, ಮಾಹಿತಿ ಒದಗಿಸುವುದು? | ಇಂಜಿನಿಯರ್ ಹುದ್ದೆಗಳನ್ನು ಸ್ಥಳೀಯವಾಗಿ ಲಭ್ಯವಿರುವ ಅಭ್ಯರ್ಥಿಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳುವ ಯಾವುದೇ ಪ್ರಸ್ತಾವನೆ ಇರುವುದಿಲ್ಲ. ಆದಾಗ್ಯೂ, ಅವಶ್ಯವಿರುವ ಹುದ್ದೆಗಳಿಗೆ ಈ ಕೆಳಕಂಡ ನಿಯಮಿತಗಳಲ್ಲಿ ನೇಮಿಸಲಾಗಿದೆ.<br>**ಕರ್ನಾಟಕ ವಿದ್ಯುತ್ ಕಾರ್ಖಾನೆ ನಿಯಮಿತ:-** ಕವಿಕಾ ಸಂಸ್ಥೆಯಲ್ಲಿ ಹೊರಗುತ್ತಿಗೆ ಏಜೆನ್ಸಿಯಾದ ಮೆ॥ ಮಾರ್ಸ್ ಸೆಕ್ಯುರಿಟ್ ಅಂಡ್ ಆಲೈಡ್ ಸರ್ವಿಸಸ್ ಕಂಪನಿ ಮುಖಾಂತರ 05 ಇಂಜಿನಿಯರ್‌ಗಳನ್ನು ಹೊರಗುತ್ತಿಗೆ ಆಧಾರದಲ್ಲಿ ನೇಮಿಸಿಕೊಳ್ಳಲಾಗಿದೆ.<br>**ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ:-** ಸಂಸ್ಥೆಯ ಅವಶ್ಯಕ ಕಾರ್ಯಗಳನ್ನು ನಿರ್ವಹಿಸಲು ಇಂಜಿನಿಯರ್ ಸೇವೆಯನ್ನು ಹೊರಗುತ್ತಿಗೆ ಏಜೆನ್ಸಿ ಮೂಲಕ ಪಡೆಯಲಾಗಿದೆ. |

ಸಂಖ್ಯೆ: ಎನರ್ಜಿ 67 ಇಬಿಎಸ್ 2025

(ಕೆ.ಜೆ.ಜಾರ್ಜ್)
ಇಂಧನ ಸಚಿವರು
7/8/25